# All India Radio: Bangalore
# National Bulletin In Kannada
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

26.07.2026 19.35 p.m.

<><><><>

ಮುಖ್ಯಾಂಶಗಳು

- ಪಿನಾಕಾ ರಾಕೆಟ್ ಯಶಸ್ವಿ ಪರೀಕ್ಷೆಯ ಹಿಂದೆ ದೇಶದ ವಿಜ್ಞಾನಿಗಳು, ಎಂಜಿನಿಯರ್‌ಗಳ ಸಾಮೂಹಿಕ ಪರಿಶ್ರಮ - ಮನ್ ಕೀ ಬಾತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ
- ದೇಶದ ಸಾಂಸ್ಕೃತಿಕ ನೀತಿಯಲ್ಲಿ ಸಾಮೂಹಿಕ ಭಾಗವಹಿಸುವಿಕೆ, ಸದಾ ಶಕ್ತಿಯ ಮೂಲ - ವಿಕಸಿತ ವೈಬ್ರಂಟ್ ವಿಲೇಜ್ ಪ್ರೋಗ್ರಾಂ ನಲ್ಲಿ ಪ್ರಧಾನಿ ಪ್ರತಿಪಾದನೆ
- ಪಾಕ್ ಆಕ್ರಮಿತ ಜಮ್ಮು-ಕಾಶ್ಮೀರ ಮರಳಿ ಪಡೆಯುವುದೇ, ಭಾರತ-ಪಾಕಿಸ್ತಾನ ನಡುವಿನ ಏಕೈಕ ಸಮಸ್ಯೆ - ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್
- ಕಾಮನ್‌ವೆಲ್ತ್ ಕ್ರೀಡಾಕೂಟ: ವೈಟ್‌ಲಿಫ್ಟಿಂಗ್ ಸ್ಪರ್ಧೆಯ ಪುರುಷರ ೬೦ ಕೆ.ಜಿ ವಿಭಾಗದಲ್ಲಿ ಭಾರತದ ರಿಷಿಕಾಂತ ಸಿಂಗ್‌ಗೆ ಬೆಳ್ಳಿ
- ಟಿ-೨೦ ಕ್ರಿಕೆಟ್: ಸರಣಿಯ ಅಂತಿಮ ಪಂದ್ಯದಲ್ಲಿ ಜಿಂಬಾಬ್ವೆಗೆ ೧೯೩ ರನ್‌ಗಳ ಗುರಿ ನೀಡಿದ ಭಾರತ

<><><><>

ಇಂದು 'ಕಾರ್ಗಿಲ್ ವಿಜಯ ದಿವಸ'. ಈ ಹಿನ್ನೆಲೆಯಲ್ಲಿ ವೀರ ಸೈನಿಕರಿಗೆ ಮತ್ತು ಹುತಾತ್ಮ ಯೋಧರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ. ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನ ೧೩೬ನೇ ಸಂಚಿಕೆ ಉದ್ದೇಶಿಸಿ ಮಾತನಾಡಿದ ಅವರು, ಕಾರ್ಗಿಲ್‌ನ ಎತ್ತರವಾದ ಶಿಖರಗಳು, ಪ್ರತಿಕೂಲ ಹವಾಮಾನ, ಶತ್ರುಗಳ ತೀವ್ರ ಸವಾಲುಗಳು ಯೋಧರ ಮುಂದಿದ್ದವು. ಆದರೆ, ಅವರ ಅಚಲ ಧೈರ್ಯ, ಅಸಾಧಾರಣ ಶೌರ್ಯ ಮತ್ತು ದೇಶಭಕ್ತಿಯ ಸಂಕಲ್ಪವು, ಪ್ರತಿಯೊಂದು ಸವಾಲಿಗಿಂತಲೂ ಎತ್ತರವಾಗಿ ನಿಂತಿತು. ಮಾತೃಭೂಮಿಯ ಭದ್ರತೆ, ಸ್ವಾಭಿಮಾನ ಮತ್ತು ಸಾರ್ವಭೌಮತ್ವವನ್ನು ಕಾಪಾಡುವ ಉದ್ದೇಶದಿಂದ ಅವರು ತಮ್ಮ ಸರ್ವಸ್ವವನ್ನು ಭಾರತ ಮಾತೆಗೆ ಅರ್ಪಿಸಿದರು ಎಂದು ಸ್ಮರಿಸಿದರು. ಕೆಲವು ದಿನಗಳ ಹಿಂದೆ, ಐಎನ್‌ಎಸ್ ಮಹೇಂದ್ರಗಿರಿಯನ್ನು ಭಾರತೀಯ ನೌಕಾಪಡೆಗೆ ಸೇರಿಸಲಾಯಿತು. ಈ ಆಧುನಿಕ ಯುದ್ಧನೌಕೆಯನ್ನು ಸಂಪೂರ್ಣವಾಗಿ ಭಾರತದಲ್ಲಿ ವಿನ್ಯಾಸಗೊಳಿಸಿ, ಭಾರತದಲ್ಲಿಯೇ ನಿರ್ಮಿಸಲಾಗಿದೆ. ಶೇಕಡ ೭೫ಕ್ಕೂ ಹೆಚ್ಚು ಸ್ಥಳೀಯ ವಸ್ತುಗಳನ್ನು ಇದರಲ್ಲಿ ಬಳಸಲಾಗಿದೆ. ಇದು ಆತ್ಮನಿರ್ಭರ ಭಾರತದ ವೃದ್ಧಿಸುತ್ತಿರುವ ಶಕ್ತಿಯ

ಸಂಕೇತವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಈ ತಿಂಗಳು, ಡಿಆರ್‌ಡಿಒ, ಪಿನಾಕಾ ಐಂಟೆಂ ಖಚಿಟೆಂಜ ಉಣುಜಜಜ ಖಂಥಿಇಜಣ ಅನ್ನು ಯಶಸ್ವಿಯಾಗಿ ಪರೀಕ್ಷಿಸಿತು. ಈ ಯಶಸ್ಸಿನ ಹಿಂದೆ ವಿಜ್ಞಾನಿಗಳು ಮತ್ತು ಎಂಜಿನಿಯರ್‌ಗಳ ಸಾಮೂಹಿಕ ಪರಿಶ್ರಮ ಅಡಗಿದೆ. ಕೇವಲ ಎರಡು ಅಥವಾ ಮೂರು ದಿನಗಳ ಹಿಂದೆ, ಕುಶಾ ಕ್ಷಿಪಣಿಯನ್ನು ಸಹ ಡಿಆರ್‌ಡಿಒ ಯಶಸ್ವಿಯಾಗಿ ಪರೀಕ್ಷಿಸಿತು ಎಂದು ಅವರು ತಿಳಿಸಿದರು. ರಕ್ಷಣಾ ಉತ್ಪಾದನೆಯಾಗಲಿ, ರಕ್ಷಣಾ ರಫ್ತುಗಳಾಗಲಿ ಅಥವಾ ಸ್ನೇಹಪರ ರಾಷ್ಟ್ರಗಳೊಂದಿಗೆ ರಾಜಕೀಯ ಸಹಕಾರವಾಗಲಿ - ಭಾರತ ನಿರಂತರವಾಗಿ ಹೊಸ ಎತ್ತರಕ್ಕೆ ಏರುತ್ತಿದೆ. ಈ ತಿಂಗಳ ಆರಂಭದಲ್ಲಿ, ಇಂಡೋನೇಷ್ಯಾದಲ್ಲಿ ಬ್ರಹ್ಮೋಸ್ ಮತ್ತು ಅಸ್ತ್ರ ಎಂಬ ಕ್ಷಿಪಣಿಗಳ ಕುರಿತು ಪ್ರಮುಖ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಭಾರತದ ರಕ್ಷಣಾ ಉಪಕರಣಗಳು ಮತ್ತು ತಂತ್ರಜ್ಞಾನದಲ್ಲಿ ಜಾಗತಿಕ ಮಟ್ಟದಲ್ಲಿ ವಿಶ್ವಾಸ ವೃದ್ಧಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಗ್ಲಾಸ್ಗೋದಲ್ಲಿ ಕಾಮನ್‌ವೆಲ್ತ್ ಕ್ರೀಡಾಕೂಟ ಪ್ರಾರಂಭವಾಗಿದೆ. ದೇಶದ ಎಲ್ಲಾ ಆಟಗಾರರು ಮತ್ತು ಕ್ರೀಡಾಪಟುಗಳು ಅಸಾಧಾರಣ ಪ್ರದರ್ಶನ ನೀಡಿ, ಜನರ ಹೃದಯ ಗೆಲ್ಲಬೇಕೆಂಬುದು ಎಲ್ಲಾ ಭಾರತೀಯರ ಆಶಯ. ಇನ್ನೊಂದೆಡೆ, ಜಪಾನ್ ಓಪನ್ ಬ್ಯಾಡ್ಮಿಂಟನ್, ಪ್ರಶಸ್ತಿಯನ್ನು ಗೆದ್ದ ಮೊದಲ ಭಾರತೀಯ ಮಹಿಳೆ ಎಂಬ ಹೆಗ್ಗಳಿಕೆಗೆ ಪಿ.ವಿ.ಸಿಂಧು ಪಾತ್ರರಾಗಿದ್ದಾರೆ. ಅವರ ಈ ಸಾಧನೆ ಬಗ್ಗೆ ಇಡೀ ರಾಷ್ಟ್ರ ಹೆಮ್ಮೆಪಡುತ್ತದೆ ಎಂದರು. ಭಾರತೀಯ ಮಹಿಳಾ ಕ್ರಿಕೆಟ್ ತಂಡವು ಲಂಡನ್‌ನ ಲಾರ್ಡ್ಸ್ ಕ್ರೀಡಾಂಗಣದಲ್ಲಿ ತನ್ನ ಮೊದಲ ಟೆಸ್ಟ್ ಪಂದ್ಯವನ್ನು ಗೆದ್ದಿದೆ. ಇದು ಐತಿಹಾಸಿಕ ಗೆಲುವು. ಲಾರ್ಡ್ಸ್‌ನ ಸುದೀರ್ಘ ಇತಿಹಾಸದಲ್ಲಿ ಮಹಿಳಾ ತಂಡದ ಮೊದಲ ಟೆಸ್ಟ್ ಪಂದ್ಯ ಇದಾಗಿತ್ತು. ೧೯೮೩ರಲ್ಲಿ ಭಾರತ ತನ್ನ ಮೊದಲ ಕ್ರಿಕೆಟ್ ವಿಶ್ವಕಪ್ ಅನ್ನು ಗೆದ್ದಿದ್ದು ಇದೇ ಮೈದಾನದಲ್ಲಿ. ಈಗ, ನಮ್ಮ 'ನಾರಿ ಶಕ್ತಿ' ಇಲ್ಲಿ ರಾಷ್ಟ್ರದ ಹೆಸರನ್ನು ಪ್ರಕಾಶಮಾನಗೊಳಿಸಿದೆ ಎಂದು ಶ್ಲಾಘಿಸಿದರು. ಕಳೆದ ಭಾನುವಾರ ವಿಕ್ರಮ್-೧ ರಾಕೆಟ್ ಯಶಸ್ವಿ ಉಡಾವಣೆಯಾಯಿತು. ಇದು ಖಾಸಗಿ ವಲಯದಿಂದ ಅಭಿವೃದ್ಧಿಪಡಿಸಲ್ಪಟ್ಟ ಭಾರತದ ಮೊದಲ ರಾಕೆಟ್ ಆಗಿದೆ. ಸುದೀರ್ಘಕಾಲದವರೆಗೆ, ಬಾಹ್ಯಾಕಾಶ ವಲಯವು, ಖಾಸಗಿ ವಲಯಕ್ಕೆ ಮುಕ್ತವಾಗಿರಲಿಲ್ಲ. ಹಾಗಾಗಿ ಈ ಕ್ಷೇತ್ರದಲ್ಲಿ ಆಸಕ್ತಿ ಹೊಂದಿದ ಅನೇಕ ಯುವಕರಿಗೆ ತಮ್ಮ ಪ್ರತಿಭಾ ಪ್ರದರ್ಶನಕ್ಕೆ ಅವಕಾಶ ಲಭಿಸುತ್ತಿರಲಿಲ್ಲ. ಯುವಕರ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು, ನಾವು ಬಾಹ್ಯಾಕಾಶ ವಲಯವನ್ನು ಖಾಸಗಿ ಉದ್ಯಮಕ್ಕೆ ಮುಕ್ತಗೊಳಿಸಿದ್ದೇವೆ. ಇಂದು, ಅದರ ಫಲಿತಾಂಶಗಳಿಗೆ ಜಗತ್ತು ಸಾಕ್ಷಿಯಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><><><>

ಭಾರತದ ಸಾಂಸ್ಕೃತಿಕ ನೀತಿಯಲ್ಲಿ ಸಾಮೂಹಿಕ ಭಾಗವಹಿಸುವಿಕೆಯು ಸದಾ ಶಕ್ತಿಯ ಮೂಲವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ವಿಕಸಿತ ವೈಬ್ರಂಟ್ ವಿಲೇಜ್ ಪ್ರೋಗ್ರಾಂ ೨೦೨೬ ರಲ್ಲಿ ಇಂದು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ರಾಜ್ಯಗಳು ಮತ್ತು

ಕೇಂದ್ರಾಡಳಿತ ಪ್ರದೇಶಗಳ ೪೦೦ ಕ್ಕೂ ಹೆಚ್ಚು ಯುವ ಪ್ರತಿನಿಧಿಗಳೊಂದಿಗೆ ಪ್ರಧಾನಿ ಸಂವಾದ ನಡೆಸಿದರು. ಅಭಿವೃದ್ಧಿ ಪ್ರಕ್ರಿಯೆಯಿಂದ ಹಿಂದೆ ಹೊರಗುಳಿದವರಿಗೆ ಆದ್ಯತೆ ನೀಡಲು ಮತ್ತು ಸಬಲೀಕರಣಗೊಳಿಸಲು ಸರ್ಕಾರ, ಸಂಘಟಿತ ಪ್ರಯತ್ನಗಳನ್ನು ಮಾಡುತ್ತಿದೆ. ಈ ಕಾರ್ಯಕ್ರಮದಲ್ಲಿ ಯುವತಿಯರ ಭಾಗವಹಿಸುವಿಕೆಯು ಭಾರತದ ಹೆಣ್ಣುಮಕ್ಕಳ ಆತ್ಮವಿಶ್ವಾಸ ಮತ್ತು ಧೈರ್ಯವನ್ನು ಪ್ರತಿಬಿಂಬಿಸುತ್ತದೆ. ಪ್ರತಿಯೊಬ್ಬ ಯುವ ವ್ಯಕ್ತಿ, ವಿಶೇಷವಾಗಿ ದೇಶದ ಪ್ರತಿಯೊಬ್ಬ ಹೆಣ್ಣುಮಗಳು, ಆತ್ಮವಿಶ್ವಾಸ ಮತ್ತು ದೃಢನಿಶ್ಚಯದಿಂದ ಮುಂದುವರಿಯುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ಅವರು ಹೇಳಿದರು. ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಭಾರತದ ಗಡಿ ಪ್ರದೇಶಗಳ ಸಾಮಾಜಿಕ-ಆರ್ಥಿಕ ಪರಿಸ್ಥಿತಿಗಳು, ಸಾಂಸ್ಕೃತಿಕ ಪರಂಪರೆ ಮತ್ತು ಅಭಿವೃದ್ಧಿ ಆಕಾಂಕ್ಷೆಗಳ ಪ್ರಾಯೋಗಿಕ ಜ್ಞಾನ ಒದಗಿಸುತ್ತದೆ. ಸಮುದಾಯದ ಭಾಗವಹಿಸುವಿಕೆ, ರಾಷ್ಟ್ರೀಯ ಏಕೀಕರಣ ಮತ್ತು ಗಡಿ ಗ್ರಾಮಗಳ ಕಾರ್ಯತಂತ್ರದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

<><><>

ಭಾರತದ ವಿಭಜನೆಯು ಇತಿಹಾಸದ ಅತ್ಯಂತ ದೊಡ್ಡ ಪ್ರಮಾದ. ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರವನ್ನು ಮರಳಿ ಪಡೆಯುವುದೇ, ಭಾರತ ಮತ್ತು ಪಾಕಿಸ್ತಾನದ ನಡುವೆ ಬಾಕಿ ಇರುವ ಏಕೈಕ ಸಮಸ್ಯೆಯಾಗಿದೆ ಎಂದು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯ ಕಾಶ್ಮೀರಿ ಸಾಂಸ್ಕೃತಿಕ ಕೇಂದ್ರದಲ್ಲಿ ಪಿಒಜೆಕೆ ಯುವ ವೇದಿಕೆಯ ಸಹಯೋಗದೊಂದಿಗೆ ಜಮ್ಮು-ಕಾಶ್ಮೀರ ಪೀಪಲ್ಸ್ ಫೋರಮ್ ಆಯೋಜಿಸಿದ್ದ ೨೭ನೇ ಕಾರ್ಗಿಲ್ ವಿಜಯ್ ದಿವಸ್ ಸ್ಮರಣಾರ್ಥ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಗಡಿ ನಿರ್ವಹಣೆಯನ್ನು ಬಲಪಡಿಸುವ ಮೂಲಕ ಪೂರ್ವಭಾವಿ ಕಾರ್ಯತಂತ್ರದೊಂದಿಗೆ ಭಾರತ, ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆ ನೀತಿಯೊಂದಿಗೆ ತನ್ನ ರಾಷ್ಟ್ರೀಯ ಭದ್ರತಾ ವಿಧಾನವನ್ನು ಮೂಲಭೂತವಾಗಿ ಪರಿವರ್ತಿಸಿದೆ ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ರಕ್ಷಣಾ ಕಾರ್ಯತಂತ್ರವನ್ನು ಪ್ರತಿಕ್ರಿಯಾತ್ಮಕ ವಿಧಾನದಿಂದ, ಬಾಹ್ಯ ಆಕ್ರಮಣದ ವಿರುದ್ಧ ನಿರ್ಣಾಯಕ ಮತ್ತು ಪೂರ್ವಭಾವಿ ಪ್ರತಿಕ್ರಿಯೆಯಾಗಿ ಪರಿವರ್ತಿಸಿದ್ದಾರೆ ಎಂದು ಡಾ. ಜಿತೇಂದ್ರ ಸಿಂಗ್ ಹೇಳಿದರು.

<><><>

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಇಂದು ಶಿಕ್ಷಣ ಸಚಿವರಾಗಿ ಅಧಿಕಾರ ವಹಿಸಿಕೊಂಡರು. ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯ ನಂತರ ನಿನ್ನೆ ಅವರಿಗೆ ಶಿಕ್ಷಣ ಖಾತೆ ಜವಾಬ್ದಾರಿಯನ್ನು ವಹಿಸಲಾಯಿತು. ಪ್ರಹ್ಲಾದ್ ಜೋಶಿ ಅವರು ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಪೂರೈಕೆ ಹಾಗೂ ನವ ಮತ್ತು ನವೀಕರಿಸಬಹುದಾದ ಇಂಧನ ಖಾತೆಗಳನ್ನು ಸಹ ಹೊಂದಿದ್ದಾರೆ. ಅಧಿಕಾರ ವಹಿಸಿಕೊಂಡ ಕೂಡಲೇ, ಅವರು ವಿವಿಧ ಯೋಜನೆಗಳು ಮತ್ತು

ಪ್ರಮುಖ ಉಪಕ್ರಮಗಳ ಅನುಷ್ಠಾನವನ್ನು ನಿರ್ಣಯಿಸಲು ಶಿಕ್ಷಣ ಸಚಿವಾಲಯದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ಸೇರಿದಂತೆ ಸಚಿವಾಲಯದ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

<><><><>

ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ತಿದ್ದುಪಡಿ ಮಸೂದೆ-೨೦೨೬ ಅನ್ನು ಲೋಕಸಭೆಯಲ್ಲಿ ನಾಳೆ ಕೇಂದ್ರ ಸರ್ಕಾರ ಮಂಡಿಸಲಿದೆ. ೨೦೨೪ರ ಸಾರ್ವಜನಿಕ ಪರೀಕ್ಷೆಗಳ ಅಕ್ರಮ ತಡೆ ಕಾಯ್ದೆಗೆ ತಿದ್ದುಪಡಿ ತರಲು ಈ ಮಸೂದೆ ಉದ್ದೇಶಿಸಿದ್ದು, ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಮಸೂದೆಯನ್ನು ಮಂಡಿಸಲಿದ್ದಾರೆ. ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಪರೀಕ್ಷಾ ಅಕ್ರಮ ಪ್ರಕರಣಗಳಲ್ಲಿ ತ್ವರಿತ ನ್ಯಾಯಾಲಯಗಳ ಸ್ಥಾಪನೆ ಮತ್ತು ಕಠಿಣ ಶಿಕ್ಷೆ ವಿಧಿಸುವ ಸಂಬಂಧದ ಕರಡು ಮಸೂದೆಗೆ ಕೇಂದ್ರ ಸಚಿವ ಸಂಪುಟ ಶುಕ್ರವಾರ ಅನುಮೋದನೆ ನೀಡಿತ್ತು.

<><><><>

ಪ್ರಧಾನಮಂತ್ರಿ ಸಂಗ್ರಹಾಲಯದಲ್ಲಿ ಇಂದು ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಎಐ ಹೋಲೋಬಾಕ್ಸ್ ಉದ್ಘಾಟಿಸಲಾಯಿತು. ಉದ್ಘಾಟನಾ ಸಮಾರಂಭದಲ್ಲಿ ಅಟಲ್ ಬಿಹಾರಿ ವಾಜಪೇಯಿ ಕುಟುಂಬ ಸದಸ್ಯರು ಭಾಗವಹಿಸಿದ್ದರು. ೧೯೯೯ ರ ಕಾರ್ಗಿಲ್ ಯುದ್ಧವು ಅಟಲ್ ಬಿಹಾರಿ ವಾಜಪೇಯಿ ಅವರು ಪ್ರಧಾನಿಯಾಗಿದ್ದ ಅವಧಿಯಲ್ಲಿ ನಡೆದಿದ್ದರಿಂದ, ಸಂಗ್ರಹಾಲಯವು ಕಾರ್ಗಿಲ್ ವಿಜಯ್ ದಿವಸದಂದು ವಿಶೇಷ ಪ್ರದರ್ಶನವನ್ನು ಸಹ ಪ್ರದರ್ಶಿಸುತ್ತಿದೆ. ಪ್ರದರ್ಶನವು ಮೈಕ್ರೋಫಿಲ್ಮ್‌ಗಳು, ಆರ್ಕೈವಲ್ ವಿಡಿಯೊಗಳು, ಛಾಯಾಚಿತ್ರಗಳು ಹಾಗೂ ಭಾರತೀಯ ಸಶಸ್ತ್ರ ಪಡೆಗಳ ಧೈರ್ಯ ಮತ್ತು ತ್ಯಾಗವನ್ನು ಎತ್ತಿ ತೋರಿಸುವ ವೈಯಕ್ತಿಕ ಪತ್ರಗಳನ್ನು ಒಳಗೊಂಡಿದೆ. ಎಐ ಹೋಲೋಬಾಕ್ಸ್ ಮಹಾತ್ಮ ಗಾಂಧಿ, ಸರ್ದಾರ್ ವಲ್ಲಭಭಾಯಿ ಪಟೇಲ್, ಅಟಲ್ ಬಿಹಾರಿ ವಾಜಪೇಯಿ ಮತ್ತು ಡಾ. ಎ.ಪಿ.ಜೆ.ಅಬ್ದುಲ್ ಕಲಾಂ ಅವರ ವಿಶಿಷ್ಟ ಛಾಯಾಚಿತ್ರಗಳು ಸೇರಿದಂತೆ ಅವರ ಕುರಿತ ಮಾಹಿತಿ ಸಹ ಒಳಗೊಂಡಿದೆ. ಈ ಉಪಕ್ರಮಗಳ ಮೂಲಕ, ಪ್ರಧಾನಮಂತ್ರಿ ಸಂಗ್ರಹಾಲಯವು ಭಾರತದ ಸಶಸ್ತ್ರ ಪಡೆಗಳ ಶೌರ್ಯವನ್ನು ಗೌರವಿಸುವ ಮತ್ತು ದೇಶದ ದಾರ್ಶನಿಕ ನಾಯಕರ ಪರಂಪರೆಯನ್ನು ಸಂರಕ್ಷಿಸುವ ಗುರಿಯನ್ನು ಹೊಂದಿದೆ.

<><><><>

ಗ್ಲಾಸ್ಗೋದಲ್ಲಿ ನಡೆಯುತ್ತಿರುವ ಕಾಮನ್‌ವೆಲ್ತ್ ಕ್ರೀಡಾಕೂಟದ ವೈಟ್‌ಲಿಫ್ಟಿಂಗ್ ಕ್ರೀಡೆಯಲ್ಲಿ ಭಾರತದ ರಿಷಿಕಾಂತ ಸಿಂಗ್ ಪುರುಷರ ೬೦ ಕೆ.ಜಿ ವಿಭಾಗದಲ್ಲಿ ಬೆಳ್ಳಿ ಗೆದ್ದಿದ್ದಾರೆ. ಒಟ್ಟಾರೆ ೨೬೪ ಕೆ.ಜಿ ತೂಕ ಎತ್ತಿದ ರಿಷಿಕಾಂತ ಸಿಂಗ್, ಸ್ನಾಚ್ ಸುತ್ತಿನಲ್ಲಿ ೧೨೧ ಕೆ.ಜಿ ಎತ್ತುವ ಮೂಲಕ ಕಾಮನ್‌ವೆಲ್ತ್‌ನಲ್ಲಿ ದಾಖಲೆ ನಿರ್ಮಿಸಿದರು. ಮಲೇಷಿಯಾದ ಮಹಮದ್ ಅನೀಕ್ ಕಸ್ದಾನ್ ಚಿನ್ನದ ಪದಕ ಪಡೆದರೆ, ಕೀನ್ಯಾದ ಜಶುವಾ ಅಮುಂಗಾ ಬೋಯಾ ರಜತ ಗೆದ್ದುಕೊಂಡರು. ಇದಕ್ಕು ಮೊದಲು ಪ್ಯಾರಾ ಪವರ್‌ಲಿಫ್ಟರ್ ಜಂಡು ಕುಮಾರ್ ರಜತ ಗೆದ್ದುಕೊಂಡರು.

<><><><>

ಪಾಕಿಸ್ತಾನದದಲ್ಲಿ ಮುಂಗಾರು ಸಂಬಂಧಿತ ಅವಘಡಗಳಲ್ಲಿ ಇದುವರೆಗೂ ೯೭ ಮಂದಿ ಅಸುನೀಗಿದ್ದು, ನೂರಾರು ಜನರು ಗಾಯಗೊಂಡಿದ್ದಾರೆ. ಪೂರ್ವ ಪಾಕಿಸ್ತಾನದಲ್ಲಿ ಜನರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕಳೆದು ಒಂದು ತಿಂಗಳಿಂದ ಪಾಕಿಸ್ತಾನ ಅತಿವೃಷ್ಟಿಯಿಂದಾಗಿ ಬಾಧಿತವಾಗಿದೆ. ಇನ್ನೊಂದೆಡೆ, ಚೀನಾದ ಗನ್ಸು ಪ್ರಾಂತ್ಯದಲ್ಲಿ ಇಂದು ಮುಂಜಾನೆ ಸಂಭವಿಸಿದ ಭೂಕುಸಿತ-ಪ್ರವಾಹದಿಂದಾಗಿ ಕನಿಷ್ಠ ೧೦ ಜನರು ಅಸುನೀಗಿದ್ದಾರೆ ಎಂದು ವರದಿಯಾಗಿದೆ. ಬಿರುಗಾಳಿ ನೌವಲ್‌ನಿಂದಾಗಿ ಚೀನಾದಲ್ಲಿನ ಗಾಂಗ್‌ಡಾಂಗ್‌ನ ವಿಮಾನ ಮತ್ತು ರೈಲು ಸಂಚಾರ ವ್ಯತ್ಯಯವಾಗಿದೆ.

<><><><>

ಹರಾರೆಯಲ್ಲಿ ನಡೆಯುತ್ತಿರುವ ಜಿಂಬಾಬ್ವೆ ವಿರುದ್ಧದ ಮೂರನೇ ಹಾಗೂ ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೯೨ ರನ್ ಗಳಿಸಿದೆ. ಭಾರತದ ಪರ ವೈಭವ್ ಸೂರ್ಯವಂಶಿ ೪೯ ಎಸೆತಗಳಲ್ಲಿ ೮೧ ರನ್ ಸಿಡಿಸಿದರು.  ೧೯೩ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿರುವ ಜಿಂಬಾಬ್ವೆ ಇತ್ತೀಚಿನ ವರದಿ ಬಂದಾಗ ೧೫.೧ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೨೪ ರನ್ ಗಳಿಸಿ ಆಡುತ್ತಿದೆ. ಎರಡು ಪಂದ್ಯಗಳನ್ನು ಗೆದ್ದು, ಈಗಾಗಲೇ ಸರಣಿ ವಶಪಡಿಸಿಕೊಂಡಿರುವ ಭಾರತ, ಐಸಿಸಿ ಪುರುಷರ ಟಿ-೨೦ ಕ್ರಿಕೆಟ್ ರ್‍ಯಾಂಕಿಂಗ್‌ನಲ್ಲಿ ಅಗ್ರಸ್ಥಾನಕ್ಕೇರಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>